ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಎರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 02ನೇ ಡಿಸೆಂಬರ್, 2013

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

ಆ) ದಿನಾಂಕ 26.11.2013ರ ಎರಡನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಮುನಿರತ್ನ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 20(671) : ಕಂದಾಯ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಯವರು) ಅವರು:-

i) 2013-14ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೇ ಕಂತು) ಮಂಡನೆ, ಚರ್ಚೆ, ಸರ್ಕಾರದಿಂದ ಉತ್ತರ ಹಾಗೂ ಮತಕ್ಕೆ ಹಾಕುವುದು.

ii) 2013-14ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯಮಾವಧಿ ಪರಿಶೀಲನಾ ವರದಿಯನ್ನು ಮಂಡಿಸುವುದು.

೩. ಶಾಸನ ರಚನೆ

I <u>ವಿಧೇಯಕವನ್ನು ಹಿಂದಕ್ಕೆ ಪಡೆಯುವುದು.</u>

ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2009.

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು) ಅವರು:-

2009ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಹಿಂಪಡೆಯಬೇಕೆಂದು ಅನುಮತಿ ಕೋರುವುದು.

ಪು.ತಿ.ನೋ.,

II. ವಿಧೇಯಕಗಳನ್ನು ಮಂಡಿಸುವುದು

1) ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕ, 2013
ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2) ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2013
ಶ್ರೀ ಎಚ್. ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

III. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕ, 2013.

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2013.

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3) ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2013.

ಶ್ರೀ ವಿ.ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,

4) ಕರ್ನಾಟಕ ರಾಜ್ಯ ಮಹಿಳಾ ಆಯೋಗ (ತಿದ್ದುಪಡಿ)ವಿಧೇಯಕ, 2013.

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:-

ಅ) 2013ನೇ ಸಾಲಿನ ರಾಜ್ಯ ಮಹಿಳಾ ಆಯೋಗ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5) ಕರ್ನಾಟಕ ಕೊಳಚೆ ಪ್ರದೇಶಗಳ (ಮೇಲ್ಪಾಟು ಮತ್ತು ನಿರ್ಮೂಲನ) (ತಿದ್ದುಪಡಿ) ವಿಧೇಯಕ, 2013.

ಡಾ|| ಎಂ.ಹೆಚ್. ಅಂಬರೀಷ್ (ವಸತಿ ಸಚಿವರು) ಅವರು

ಅ) 2013ನೇ ಸಾಲಿನ ಕರ್ನಾಟಕ ಕೊಳಚೆ ಪ್ರದೇಶಗಳ (ಮೇಲ್ಪಾಟು ಮತ್ತು ನಿರ್ಮೂಲನ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6) ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ)(ತಿದ್ದುಪಡಿ) ವಿಧೇಯಕ, 2013

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಯವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ)(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

7) ಕರ್ನಾಟಕ ಸಿವಿಲ್ ಸೇವೆಗಳ (ಜಲ ಸಂಪನ್ಮೂಲ ಸೇವೆ)(ಸಹಾಯಕ ಇಂಜಿನಿಯರುಗಳ ಮತ್ತು ಕಿರಿಯ ಇಂಜಿನಿಯರುಗಳ ವಿಶೇಷ ನೇಮಕಾತಿ) ವಿಧೇಯಕ, 2013.

ಶ್ರೀ ಎಂ.ಬಿ. ಪಾಟೀಲ್ (ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಸಿವಿಲ್ ಸೇವೆಗಳ (ಜಲ ಸಂಪನ್ಮೂಲ ಸೇವೆ)(ಸಹಾಯಕ ಇಂಜಿನಿಯರುಗಳ ಮತ್ತು ಕಿರಿಯ ಇಂಜಿನಿಯರುಗಳ ವಿಶೇಷ ನೇಮಕಾತಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,

೮) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2013.

ಡಾ॥ ಶರಣಪ್ರಕಾಶ್ ಆರ್. ಪಾಟೀಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) ಅವರು:-

ಅ) 2013ನೇ ಸಾಲಿನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

೯) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2013.

ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

10)ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ, 2012.

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು) ಅವರು:-

ಅ) ಉಭಯ ಸದನಗಳಿಂದ ಅಂಗೀಕಾರವಾದಂತೆ ಮತ್ತು ಘನತೆವೆತ್ತ ರಾಜ್ಯಪಾಲರಿಂದ ಪುನರ್ ಪರಿಗಣನೆಗಾಗಿ ಸಂದೇಶದೊಂದಿಗೆ ಹಿಂದಿರುಗಿಸಿರುವ 2012ನೇ ಸಾಲಿನ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪುನರ್ ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

11) ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2013

ಶ್ರೀ ಎಚ್. ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ ಹೆಚ್.ಡಿ.ರೇವಣ್ಣ, ಹೆಚ್.ಸಿ. ಬಾಲಕೃಷ್ಣ, ಎನ್.ಹೆಚ್.ಕೋನರೆಡ್ಡಿ ಹಾಗೂ ಇತರರು ಉತ್ತರ ಕರ್ನಾಟಕದ 9 ಜಿಲ್ಲೆಗಳಿಗೆ ಕಳಸಾ-ಬಂಡೂರಿ ನಾಲಾ ಯೋಜನೆಯನ್ನು ಅನುಷ್ಠಾನಗೊಳಿಸಲು ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಬಗ್ಗೆ

ಮತ್ತು

ಶ್ರೀಯುತರುಗಳಾದ ಜಗದೀಶ ಶೆಟ್ಟರ, ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸವದಿ, ಕೆ.ಜಿ.ಬೋಪಯ್ಯ, ಮತ್ತು ಅರವಿಂದ ಲಿಂಬಾವಳಿ ಹಾಗೂ ಇತರರು ಕಳಸಾ-ಬಂಡೂರಿ ನಾಲಾ ಕಾಮಗಾರಿ ಯೋಜನೆಯು 2006-07 ರಲ್ಲಿ ಪ್ರಾರಂಭಿಸಲಾಗಿದ್ದರೂ ಇದೂವರೆಗೂ ಪೂರ್ಣಗೊಳ್ಳದೆ ನಿಧಾನಗತಿಯಲ್ಲಿ ಸಾಗುತ್ತಿರುವ ಬಗ್ಗೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ. ರೇವಣ್ಣ ಅವರು ಹೊಳೆನರಸೀಪುರ ತಾಲ್ಲೂಕಿನ ದುದ್ದ, ಪಡುವಲಹಿಪ್ಪೆ ಮತ್ತು ಹರದನಹಳ್ಳಿಗಳ ಸಮುದಾಯ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ರೋಗಿಗಳಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕಿನ ಸಂಪಾಜೆ, ಚೆಂಬು, ಪೆರಾಜೆ ಮತ್ತು ಕರಿಕೆ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿ ಅಡಿಕೆ ಬೆಳೆಗೆ ಕೊಳೆ ರೋಗ ಉಂಟಾಗಿ ಬೆಳೆಯು ನಾಶವಾಗಿರುವುದರಿಂದ ರೈತರು ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಂ.ಟಿ. ಕೃಷ್ಣಪ್ಪ ಅವರು 2012-13ನೇ ಸಾಲಿನ ಸುವರ್ಣ ಗ್ರಾಮ ಮತ್ತು ಸಿ.ಎಂ.ಜಿ.ಎಸ್‌ವೈ ಯೋಜನೆಗಳನ್ನು ಮುಂದುವರಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

4. ಶ್ರೀಯುತರಾದ ಬಸವರಾಜ ರಾಯರೆಡ್ಡಿ ಮತ್ತು ಅಪ್ಪಾಜಿ ನಾಡಗೌಡ ಅವರುಗಳು ಕೊಪ್ಪಳ ಜಿಲ್ಲೆಯ ಯಲಬುರ್ಗಾ, ಕುಷ್ಟಗಿ ಹಾಗೂ ಕೊಪ್ಪಳ ತಾಲ್ಲೂಕುಗಳು ಮತ್ತು ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ಮತ್ತು ಇಂಡಿ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. ಡಾ|| ಎ.ಬಿ. ಮಾಲಕರೆಡ್ಡಿ ಅವರು ಭಾರತದ ಸಂವಿಧಾನದ ಅನುಚ್ಛೇದ 371 ಜೆ ತಿದ್ದುಪಡಿ ಅನ್ವಯ ಹೈದ್ರಾಬಾದ-ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿನ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,

6. ಶ್ರೀ ಗುರು ಪಾಟೀಲ ಶಿರವಾಳ ಅವರು ಕೃಷ್ಣಾ ಮೇಲ್ದಂಡೆ ಯೋಜನೆಯ ಆಲಮಟ್ಟಿ ಹಾಗೂ ನಾರಾಯಣಪುರ ಅಣೆಕಟ್ಟಿನಿಂದ ಅಚ್ಚುಕಟ್ಟು ಪ್ರದೇಶದ ರೈತರ ಜಮೀನಿಗೆ ಮಾರ್ಚ್ ಅಂತ್ಯದವರೆಗೆ ನೀರು ಹರಿಸುವ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಶ್ರೀಯುತರಾದ ಕೆ.ಎಸ್. ಮಂಜುನಾಥ, ಎಂ.ಕೃಷ್ಣಾರೆಡ್ಡಿ, ಕೆ.ಆರ್. ರಮೇಶ್‌ಕುಮಾರ ಮತ್ತು ಪಿಳ್ಳ ಮುನಿಶಾಮಪ್ಪ ಅವರುಗಳು ಕರ್ನಾಟಕ ರಾಜ್ಯ ಅಕ್ಷರ ದಾಸೋಹದ ಸಿಬ್ಬಂದಿಯವರಿಗೆ ಕನಿಷ್ಠ ವೇತನ, ಬಿಸಿಯೂಟ ಸೌಲಭ್ಯ ಮತ್ತು ಅವರುಗಳನ್ನು ಶಾಲಾ ಸಿಬ್ಬಂದಿಗಳೆಂದು ಪರಿಗಣಿಸುವುದರ ಜೊತೆಗೆ ಅವರಿಗೆ ವರ್ಗಾವಣೆ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

8. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ಎಂ.ಜಿ.ಎಂ. ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇರುವುದರಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9. ಶ್ರೀಯುತರಾದ ಹೆಚ್.ಡಿ.ರೇವಣ್ಣ, ಕೆ.ಎಂ.ಶಿವಲಿಂಗೇಗೌಡ ಮತ್ತು ಸಿ.ಎನ್. ಬಾಲಕೃಷ್ಣ ಅವರುಗಳು ಹಾಸನ ನಗರದಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಕಟ್ಟಡದ ಎರಡನೇ ಹಂತದ ಕಾಮಗಾರಿಗಳಿಗೆ ಅವಶ್ಯಕ ಅನುದಾನ ಬಿಡುಗಡೆ ಮಾಡದಿರುವುದರಿಂದ ಕಾಮಗಾರಿಗಳು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

10. ಶ್ರೀಯುತರಾದ ಸಿ.ಎನ್. ಬಾಲಕೃಷ್ಣ, ಹೆಚ್.ಡಿ.ರೇವಣ್ಣ, ಕೆ.ಎಂ.ಶಿವಲಿಂಗೇಗೌಡ ಅವರುಗಳು ಹಾಸನ ಜಿಲ್ಲೆಯಲ್ಲಿ 2012-13ನೇ ಸಾಲಿನ ಪರಿಶಿಷ್ಟ ಜಾತಿ ಉಪ ಯೋಜನೆ ಕ್ರೋಢೀಕೃತ ಅನುದಾನದಲ್ಲಿ ಪರಿಶಿಷ್ಟ ಜಾತಿಯವರ ಕಾಲೋನಿಗಳಿಗೆ ಸಿ.ಸಿ ರಸ್ತೆ ಮತ್ತು ಒಳಚರಂಡಿಗಳ ಅಭಿವೃದ್ಧಿ ಕಾಮಗಾರಿಗಳಿಗೆ ಅವಶ್ಯಕ ಅನುದಾನವನ್ನು ಬಿಡುಗಡೆ ಮಾಡದಿರುವ ಬಗ್ಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

11. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ರಾಜ್ಯದಲ್ಲಿ ಸರ್ವೆ ಕಾರ್ಯವನ್ನು ಕೈಗೊಳ್ಳಲು ರೂ 300 ರಿಂದ 1200ಗಳ ವರೆಗೆ ವಸೂಲಿ ಮಾಡುತ್ತಿರುವುದರಿಂದ ರೈತರಿಗುಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಡಿ. ನಾಗರಾಜಯ್ಯ ಅವರು ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮದ್ದೂರು ರಸ್ತೆಯನ್ನು ಕೇಶಿಪ್ ವತಿಯಿಂದ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಪಿ ರಾಜೀವ್ ಅವರು ಕರ್ನಾಟಕ ವಿದ್ಯುತ್ ನಿಗಮ (ವಿಜಿಲೆನ್ಸ್) ದವರು ರೈತರು ಅಕ್ರಮವಾಗಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆದಿರುವರೆಂದು ಸುಳ್ಳು ಆರೋಪ ಹೊರಿಸಿ ಮೊಕದ್ದಮೆಗಳನ್ನು ದಾಖಲಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,

14. ಶ್ರೀ ಸಂಜಯ ಪಾಟೀಲ್ ಅವರು ರಾಜ್ಯದಲ್ಲಿ ಅಲ್ಪಸಂಖ್ಯಾತರ ಪೈಕಿ ಮುಸ್ಲಿಂ ವರ್ಗದ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ವಿದ್ಯಾರ್ಥಿವೇತನವನ್ನು ಪಾವತಿಸುತ್ತಿರುವಂತೆ ಕ್ರಿಶ್ಚಿಯನ್ ಮತ್ತು ಜೈನ್ ಧರ್ಮದ ವಿದ್ಯಾರ್ಥಿಗಳಿಗೂ ಆನ್‌ಲೈನ್ ಮೂಲಕ ವಿದ್ಯಾರ್ಥಿ ವೇತನವನ್ನು ನೀಡುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

15. ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್ ಅವರು ಬೆಳಗಾವಿ ಜಿಲ್ಲೆ ನಿಪ್ಪಾಣಿ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆಗೆ ಪುರಸಭೆಯವರು ಉಚಿತವಾಗಿ ಜಮೀನನ್ನು ನೀಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಬೆಂಗಳೂರು ಉತ್ತರ ತಾಲ್ಲೂಕು ಕಸಬಾ ಹೋಬಳಿ ನಾಗಶೆಟ್ಟಿಹಳ್ಳಿ ಹಾಗೂ ಭೂಪಸಂದ್ರ ಗ್ರಾಮದ ಕರ್ನಾಟಕ ಹಾಲು ಮಹಾಮಂಡಳಿಗೆ ಸೇರಿದ ಆಸ್ತಿಯನ್ನು ಭೂ ಮಾಫಿಯಾದೊಂದಿಗೆ ಶಾಮೀಲಾಗಿ ಸುಳ್ಳು ದಾಖಲೆಯನ್ನು ಸೃಷ್ಟಿಸಿ ಸರ್ಕಾರವನ್ನು ವಂಚಿಸುತ್ತಿರುವ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಹುಹಳ್ಳಿಗಳ ಕುಡಿಯುವ ನೀರು ಯೋಜನೆಗೆ ಹಣ ಬಿಡುಗಡೆಯಾಗಿದ್ದರೂ ಆ ಹಣ ಬಳಸಿಕೊಳ್ಳದೇ ಇರುವುದರಿಂದ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಜಗದೀಶ ಶೆಟ್ಟರ, ಗೋವಿಂದ ಎಂ.ಕಾರಜೋಳ, ಎಸ್. ಸುರೇಶ್ ಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಮತ್ತು ಲಕ್ಷ್ಮಣ ಸವದಿ ಹಾಗೂ ಇತರರು ರಾಜ್ಯದಲ್ಲಿ ಇತ್ತೀಚೆಗೆ ಜಾನುವಾರುಗಳು ಕಾಲುಬಾಯಿ ರೋಗಕ್ಕೆ ತುತ್ತಾಗಿ ಸಾವನ್ನಪ್ಪುತ್ತಿರುವುದರಿಂದ, ಕಾಲುರೋಗ ತಡೆಗೆ ಸರ್ಕಾರವು ಅಗತ್ಯ ಕ್ರಮಕೈಗೊಳ್ಳುವ ಮತ್ತು ಸೂಕ್ತ ಪರಿಹಾರ ನೀಡುವ ಬಗ್ಗೆ ಚರ್ಚೆ.

4. ಶ್ರೀ ಜೆ.ಆರ್.ಲೋಬೊ, ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಮತ್ತು ಬಿ.ಎ. ಮೊಹಿದ್ದೀನ್ ಬಾವಾ ಅವರುಗಳು ಮಂಗಳೂರು ವಿಶ್ವವಿದ್ಯಾನಿಲಯದ ಪ್ರೊಫೆಸರ್, ಸಹ ಪ್ರೊಫೆಸರ್ ಮತ್ತು ಸಹಾಯಕ ಪ್ರೊಫೆಸರುಗಳ ನೇಮಕಾತಿಯಲ್ಲಿ ನಡೆದ ಅವ್ಯಹಾರದ ಬಗ್ಗೆ ಚರ್ಚೆ.

5. ಶ್ರೀಯುತರುಗಳಾದ ಆರ್.ಅಶೋಕ, ವಿ.ಸುನೀಲಕುಮಾರ್, ಸಿ.ಟಿ.ರವಿ ಮತ್ತು ಬಿ.ಎನ್. ವಿಜಯಕುಮಾರ ಅವರುಗಳು ರಾಜ್ಯದಲ್ಲಿ ಬ್ಯಾಂಕ್-ಎ.ಟಿ.ಎಂಗಳಲ್ಲಿ ಹಾಗೂ ವಿವಿದೆಡೆ ನಡೆಯುತ್ತಿರುವ ಹಲ್ಲೆ, ದರೋಡೆ ಮತ್ತು ಕೋಮು ಹಿಂಸಾಚಾರ ಘಟನೆಗಳು ಸೇರಿದಂತೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿರುವ ವಿಷಯದ ಬಗ್ಗೆ ಚರ್ಚೆ.

ಪು.ತಿ.ನೋ.,

6. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಜಿ.ಟಿ. ದೇವೇಗೌಡ, ಎನ್. ಚಲುವರಾಯ ಸ್ವಾಮಿ ಮತ್ತು ಮಧು ಬಂಗಾರಪ್ಪ ಹಾಗೂ ಇತರರು ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಕಳಪೆ ಗುಣಮಟ್ಟದ ಔಷಧಿಗಳ ಸರಬರಾಜಿನಿಂದಾಗಿ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ ಚರ್ಚೆ.

7. ಶ್ರೀಯುತರುಗಳಾದ ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸಂಗಪ್ಪ ಸವದಿ, ಭರಮಗೌಡ ಆಲಗೌಡ ಕಾಗೆ ಅವರುಗಳು ಕೇಂದ್ರ ಸರ್ಕಾರದ ನೀರಾವರಿ ಇಲಾಖೆಯು ಎಐಬಿಪಿ ಹೊಸ ನಿಯಮಗಳನ್ನು ಜಾರಿಗೆ ತಂದಿದ್ದು ನಮ್ಮ ರಾಜ್ಯದಲ್ಲಿ ಈಗಾಗಲೇ ಎಐಬಿಪಿ ಅಡಿಯಲ್ಲಿರುವ ಯೋಜನೆಗಳು ಹಾಗೂ ಹೊಸದಾಗಿ ಸೇರ್ಪಡೆಯಾಗಿರುವ ಯೋಜನೆಗಳನ್ನು ಇ.ಆರ್.ಎಂ. ಮತ್ತು ಕಾಡಾ ಸ್ಕೀಂಗಳಡಿಯಲ್ಲಿ ಬಳಸಹುದಾದ ಪರಿಣಾಮಗಳ ಬಗ್ಗೆ ಚರ್ಚೆ.

8. ಶ್ರೀಯುತರುಗಳಾದ ಎಸ್.ಮಧುಬಂಗಾರಪ್ಪ, ಕೆ.ಎಂ.ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಬಿ.ಬಿ. ನಿಂಗಯ್ಯ ಹಾಗೂ ಇತರರು ರಾಜ್ಯದ ಅರಣ್ಯ ಜಮೀನುಗಳಲ್ಲಿ ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವ ರೈತರಿಗೆ ಹಾಗೂ ಅರಣ್ಯವಾಸಿಗಳಿಗೆ ಹಕ್ಕುಗಳನ್ನು ಮಾನ್ಯ ಮಾಡುವ ಸಲುವಾಗಿ ಅಧಿನಿಯಮ 2006, 2008 ಹಾಗೂ 2012ರ ಕಾಯ್ದೆ ಅನ್ವಯ ಗ್ರಾಮ ಸಮಿತಿಗಳನ್ನು ರಚಿಸಲು ಹಾಗೂ ಬಗರ್‌ಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರಗಳನ್ನು ವಿಸ್ತರಿಸುವ ಬಗ್ಗೆ ಚರ್ಚೆ.

೯. ಶ್ರೀಯುತರುಗಳಾದ ಡಾ॥ ಕೆ. ಸುಧಾಕರ, ಬಿ.ಎಂ.ನಾಗರಾಜ್, ಎಸ್.ಎನ್. ಸುಬ್ಬಾರೆಡ್ಡಿ, ಎಸ್.ಎನ್. ನಾರಾಯಣಸ್ವಾಮಿ ಹಾಗೂ ಇತರರು ಚಿಕ್ಕಬಳ್ಳಾಪುರ ಜಿಲ್ಲೆ ನಂದಿ ಹೋಬಳಿಯ ನೆಲಮಾಕಲಹಳ್ಳಿ ಗ್ರಾಮಗಳಲ್ಲಿ ಜವಳಿ ಪಾರ್ಕ್ ನಿರ್ಮಿಸಲು ಮಂಜೂರು ಮಾಡಲಾದ 84 ಎಕರೆ ಭೂಮಿಯನ್ನು ಕೃಷಿ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು ಸರ್ಕಾರವು ತೀರ್ಮಾನ ತೆಗೆದುಕೊಂಡಿರುವುದರ ಬಗ್ಗೆ ಚರ್ಚೆ.

10. ಶ್ರೀಯುತರುಗಳಾದ ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸವದಿ, ಭರಮಗೌಡ ಕಾಗೆ, ಸಿ.ಟಿ.ರವಿ, ಹಾಗೂ ಡಿ.ಎನ್. ಜೀವರಾಜ್ ಅವರುಗಳು ಕೇಂದ್ರ ಸರ್ಕಾರವು ಪಶ್ಚಿಮಘಟ್ಟ ಪರಿಸರ ಹಾಗೂ ಅರಣ್ಯ ರಕ್ಷಣೆಗಾಗಿ ಹೊರಡಿಸಿದ ಆದೇಶದಿಂದ ರಾಜ್ಯದ ಪಶ್ಚಿಮಘಟ್ಟ ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)